CCO - Post & code
ICO code _



**File No.AGRI-AML/109/2020-AGRI_PLAN_A-AGRICULTURE-Part(1)**

ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ: 2020-21ನೇ ಸಾಲಿಗೆ ರಾಜ್ಯದಲ್ಲಿ ರೈತ ಉತ್ಪಾದಕರ ಸಂಸ್ಥೆಗಳ (FPO) ಮೂಲಕ ಮೌಲ್ಯ ಸರಪಳಿ ಅಭಿವೃದ್ಧಿಗೆ ಬೆಂಬಲ ನೀಡುವ ಕಾರ್ಯಕ್ರಮಕ್ಕೆ ಮೊದಲ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:AGRI-AML-91/2020,ದಿನಾಂಕ:02-06-2020 ಮತ್ತು ಸೇರ್ಪಡೆ ಆದೇಶ ದಿನಾಂಕ: 16-06-2020.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020.
3. ಆರ್ಥಿಕ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ : ಆಇ 172 ವೆಚ್ಚ -4/2020, ದಿನಾಂಕ : 30-05-2020
4. ಸರ್ಕಾರದ ಆದೇಶ ಸಂಖ್ಯೆ:AGRI-AML/97/2020, ದಿನಾಂಕ:25-8-2020.
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆ:ಜಲಇ /ಪಿಕೋ /ಎಫ್‌ಪಿಓ/1/2020-21, ದಿನಾಂಕ: 31-8-2020.

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶಗಳಲ್ಲಿ 2019-20ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2020-21ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಆದೇಶದಲ್ಲಿ ಆರ್ಥಿಕ ಇಲಾಖೆಯು 2020-21 ನೇ ಸಾಲಿನಲ್ಲಿ ಜೂನ್ ರಿಂದ ನವೆಂಬರ್ ವರೆಗೆ 6 ತಿಂಗಳಿಗೆ ಹಣ ಬಿಡುಗಡೆ ಮಾಡಲು ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ಮಾಡಲಾಗಿದೆ.

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಆರ್ಥಿಕ ಇಲಾಖೆಯು ಅನಧಿಕೃತ ಪರಿಷ್ಕೃತ ಆಯವ್ಯಯ (RE) ದಲ್ಲಿ ಈ ಕಾರ್ಯಕ್ರಮಕ್ಕೆ ಲೆಕ್ಕಶೀರ್ಷಿಕೆ 2401-00-195-0-01 ರಡಿ ರೂ.200.00 ಲಕ್ಷಗಳ ಪೈಕಿ ನವೆಂಬರ್-2020 ರವರೆಗೆ ರೂ.100.00 ಲಕ್ಷಗಳ ಅನುದಾನ ಲಭ್ಯಗೊಳಿಸಲಾಗಿದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಆದೇಶದಲ್ಲಿ 2020-21ನೇ ಸಾಲಿಗೆ ರಾಜ್ಯದಲ್ಲಿ ರೈತ ಉತ್ಪಾದಕರ ಸಂಸ್ಥೆಗಳ (FPO) ಮೂಲಕ ಮೌಲ್ಯ ಸರಪಳಿ ಅಭಿವೃದ್ಧಿಗೆ ಬೆಂಬಲ ನೀಡಲು ರೂ.200.00 ಲಕ್ಷಗಳ ಅನುದಾನದಲ್ಲಿ ಲೆಕ್ಕ ಶೀರ್ಷಿಕೆ 2401-00-195-0-01 ಅಡಿ ಅನುಬಂಧ-1 ಮತ್ತು 1A ರಲ್ಲಿ ಲಗತ್ತಿಸಿರುವ ಮಾರ್ಗಸೂಚಿಯನ್ವಯ ಜಾರಿಗೆ ತರಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಲಾಗಿದೆ

ಮೇಲೆ ಓದಲಾದ (5)ರ ಪ್ರಸ್ತಾವನೆಯಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರು 2020-21ನೇ ಸಾಲಿಗೆ ರಾಜ್ಯದಲ್ಲಿ ರೈತ ಉತ್ಪಾದಕರ ಸಂಸ್ಥೆಗಳ (FPO) ಮೂಲಕ ಮೌಲ್ಯ ಸರಪಳಿ ಅಭಿವೃದ್ಧಿಗೆ ಬೆಂಬಲ ನೀಡಲು ಒದಗಿಸಿರುವ ರೂ.200.00 ಲಕ್ಷಗಳ ಅನುದಾನದಲ್ಲಿ ಲೆಕ್ಕ ಶೀರ್ಷಿಕೆ 2401-00-195-0-01 ಅಡಿ ಮೊದಲ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ದಿನಾಂಕ:30-05-2020 ರ ಅಧಿಕಾರ ಪ್ರತ್ಯಾಯೋಜಿಸಿರುವ ಆದೇಶ ಮತ್ತು ಪರಿಷ್ಕೃತ ಆಯವ್ಯಯದ(RE) ಅನಧಿಕೃತ ಟಿಪ್ಪಣಿಗಳನ್ವಯ ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, 2020-21ನೇ ಸಾಲಿಗೆ ರಾಜ್ಯದಲ್ಲಿ ರೈತ ಉತ್ಪಾದಕರ ಸಂಸ್ಥೆಗಳ (FPO) ಮೂಲಕ ಮೌಲ್ಯ ಸರಪಳಿ ಅಭಿವೃದ್ಧಿಗೆ ಬೆಂಬಲ ನೀಡಲು ಪರಿಷ್ಕೃತ ಆಯವ್ಯಯದಲ್ಲಿ ಒದಗಿಸಿರುವ ರೂ.200.00 ಲಕ್ಷಗಳ ಅನುದಾನದಲ್ಲಿ (ಲೆ.ಶೀ. 2401-00-195-0-01 ) ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: **AGRI-AML/109/2020(P-1)** ಬೆಂಗಳೂರು,</u>
<u>ದಿನಾಂಕ:**22.09.2020**.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, **2020-21**ನೇ ಸಾಲಿಗೆ ರಾಜ್ಯದಲ್ಲಿ ರೈತ ಉತ್ಪಾದಕರ ಸಂಸ್ಥೆಗಳ (FPO) ಮೂಲಕ ಮೌಲ್ಯ ಸರಪಳಿ ಅಭಿವೃದ್ಧಿಗೆ ಬೆಂಬಲ ನೀಡಲು ಪರಿಷ್ಕೃತ ಆಯವ್ಯಯದಲ್ಲಿ ಒದಗಿಸಿರುವ ರೂ.200.00 ಲಕ್ಷಗಳ ಅನುದಾನದಲ್ಲಿ (ಲೆ.ಶೀ. 2401-00-195-0-01 ) ಮೊದಲನೇ ಕಂತಿನ ಅನುದಾನವಾಗಿ ರೂ.50.00 ಲಕ್ಷಗಳನ್ನು (ಐವತ್ತು ಲಕ್ಷ ರೂಪಾಯಿಗಳು ಮಾತ್ರ) (ಉ.ಲೆ.015 (ಪೂರಕ ವೆಚ್ಚಗಳು) ರಡಿ ರೂ.2.50 ಲಕ್ಷ, ಉ.ಲೆ 051 (ಸಾಮಾನ್ಯ ವೆಚ್ಚಗಳು)ರಡಿ ರೂ.7.50 ಲಕ್ಷ ಮತ್ತು ಉ.ಲೆ.103 (ಸಹಾಯಾನುಧಾನ ಸಾಮಾನ್ಯ) ರಡಿ ರೂ.40.00 ಲಕ್ಷ) ಗಳನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

1. ಮೊದಲನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಿದ ಅನುದಾನದಲ್ಲಿ, ವೆಚ್ಚವನ್ನು ಭರಿಸಲು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ **2020**, ದಿನಾಂಕ: 30-05-2020 ರನ್ವಯ ಕ್ರಮವಹಿಸತಕ್ಕದ್ದು.

2. 2020-21ನೇ ಸಾಲಿನ ಎರಡನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆಗೆ ಸರ್ಕಾರದ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020 ರಲ್ಲಿ ನೀಡಿರುವ ಮಾರ್ಗಸೂಚಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸತಕ್ಕದ್ದು.

**File No.AGRI-AML/109/2020-AGRI_PLAN_A-AGRICULTURE-Part(1)**

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020 ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 172 ವೆಚ್ಚ-4/2020, ದಿನಾಂಕ: 30-05-2020 ರಲ್ಲಿ ಆರ್ಥಿಕ ಇಲಾಖೆ ನೀಡಿರುವ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

28/8/2020
(ಪಿ.ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
7. ಉಪಕಾರ್ಯದರ್ಶಿ ಮತ್ತು ಪದನಿಮಿತ್ತ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
10. ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
11. ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ, ಖನಿಜ ಭವನ, ಬೆಂಗಳೂರು
12. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ (ಆಯುಕ್ತರು ಜಲಾನಯನ ಅಭಿವೃದ್ಧಿ ಇಲಾಖೆ ಇವರ ಮುಖಾಂತರ).
13. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.